# ಕರ್ನಾಟಕ ವಿಧಾನ ಪರಿಷತ್ತು

| | | |
|---|---|---|
| ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ | : | 181 |
| ಸದಸ್ಯರ ಹೆಸರು | : | ಶ್ರೀ ಎಸ್.ನಾಗರಾಜ್ (ಸಂದೇಶ್ ನಾಗರಾಜ್) |
| ಉತ್ತರಿಸುವ ದಿನಾಂಕ | : | 07-12-2020 |
| ಉತ್ತರಿಸುವ ಸಚಿವರು | : | ಸಮಾಜ ಕಲ್ಯಾಣ ಸಚಿವರು |

<table>
<tr><th>ಕ್ರ.ಸಂ.</th><th>ಪ್ರಶ್ನೆ</th><th>ಉತ್ತರ</th></tr>
<tr><td>ಅ)</td><td>ಮೈಸೂರು ಮತ್ತು ಚಾಮರಾಜನಗರ ಜಿಲ್ಲೆಗಳಲ್ಲಿ ಅರಣ್ಯ ಹಕ್ಕು ಕಾಯ್ದೆ ಜಾರಿ ಅಡಿಯಲ್ಲಿ ಗಿರಿಜನ ಮತ್ತು ಬುಡಕಟ್ಟು ಜನರಿಂದ ಇದುವರೆಗೆ ಸಲ್ಲಿಕೆಯಾಗಿರುವ ಅರ್ಜಿಗಳ ಸಂಖ್ಯೆ ಎಷ್ಟು; ವಿಲೇವಾರಿಯಾಗಿರುವ ಅರ್ಜಿಗಳ ಸಂಖ್ಯೆ ಎಷ್ಟು; (ವಿವರ ಒದಗಿಸುವುದು)</td><td>ಮೈಸೂರು ಮತ್ತು ಚಾಮರಾಜನಗರ ಜಿಲ್ಲೆಗಳಲ್ಲಿ ಅರಣ್ಯ ಹಕ್ಕು ಕಾಯ್ದೆ ಜಾರಿ ಅಡಿಯಲ್ಲಿ ಗಿರಿಜನ ಮತ್ತು ಬುಡಕಟ್ಟು ಜನರಿಂದ ಇದುವರೆಗೆ ಸಲ್ಲಿಕೆಯಾಗಿರುವ ಅರ್ಜಿಗಳ ವಿವರಗಳು ಈ ಕೆಳಂಡಂತಿವೆ.<br>
ಮೈಸೂರು
<table>
<tr><th>ಕ್ಲೇಮುದಾರರ ವಿವರ</th><th>ಸ್ವೀಕೃತಗೊಂಡ ಅರ್ಜಿಗಳ ಸಂಖ್ಯೆ</th><th>ವಿತರಿಸಿರುವ ಹಕ್ಕು ಪತ್ರಗಳ ಸಂಖ್ಯೆ</th><th>ಮಂಜೂರು ಮಾಡಿರುವ ಭೂಮಿ ವಿವರ (ಎಕರೆಗಳಲ್ಲಿ)</th><th>ತಿರಸ್ಕೃತಗೊಂಡಿರುವ ಅರ್ಜಿಗಳ ಸಂಖ್ಯೆ</th><th>ಇತ್ಯರ್ಥವಾಗದೆ ಬಾಕಿ ಇರುವ ಅರ್ಜಿಗಳ ಸಂಖ್ಯೆ</th></tr>
<tr><td>ಪರಿಶಿಷ್ಟ ಪಂಗಡ</td><td>7149</td><td>722</td><td>563.25</td><td>5630</td><td>797</td></tr>
<tr><td>ಇತರೆ ಪಾರಂಪರಿಕ ಅರಣ್ಯ ವಾಸಿಗಳು</td><td>0</td><td>0</td><td>0.00</td><td>0</td><td>0</td></tr>
<tr><td>ಸಮುದಾಯ ಹಕ್ಕುಗಳು</td><td>126</td><td>38</td><td>8213.00</td><td>27</td><td>61</td></tr>
<tr><td>ಒಟ್ಟು</td><td>7275</td><td>760</td><td>8776.25</td><td>5657</td><td>858</td></tr>
</table>
ಚಾಮರಾಜನಗರ
<table>
<tr><th>ಕ್ಲೇಮುದಾರರ ವಿವರ</th><th>ಸ್ವೀಕೃತಗೊಂಡ ಅರ್ಜಿಗಳ ಸಂಖ್ಯೆ</th><th>ವಿತರಿಸಿರುವ ಹಕ್ಕು ಪತ್ರಗಳ ಸಂಖ್ಯೆ</th><th>ಮಂಜೂರು ಮಾಡಿರುವ ಭೂಮಿ ವಿವರ (ಎಕರೆಗಳಲ್ಲಿ)</th><th>ತಿರಸ್ಕೃತಗೊಂಡಿರುವ ಅರ್ಜಿಗಳ ಸಂಖ್ಯೆ</th><th>ಇತ್ಯರ್ಥವಾಗದೆ ಬಾಕಿ ಇರುವ ಅರ್ಜಿಗಳ ಸಂಖ್ಯೆ</th></tr>
<tr><td>ಪರಿಶಿಷ್ಟ ಪಂಗಡ</td><td>2173</td><td>2002</td><td>3365.9</td><td>171</td><td>0</td></tr>
<tr><td>ಇತರೆ ಪಾರಂಪರಿಕ ಅರಣ್ಯ ವಾಸಿಗಳು</td><td>249</td><td>0</td><td>0</td><td>249</td><td>0</td></tr>
<tr><td>ಸಮುದಾಯ ಹಕ್ಕುಗಳು</td><td>77</td><td>77</td><td>0</td><td>0</td><td>0</td></tr>
<tr><td>ಒಟ್ಟು</td><td>2499</td><td>2079</td><td>3365.90</td><td>420</td><td>0</td></tr>
</table>
</td></tr>
<tr><td>ಆ)</td><td>ಆದಿವಾಸಿಗಳ ಅರಣ್ಯ ಹಕ್ಕು ಮಾನ್ಯತಾ ಕಾಯ್ದೆಯನ್ನು ಸೂಕ್ತವಾಗಿ ಜಾರಿಗೆ ತರುವ ಮೂಲಕ ಈ ಅರ್ಜಿಗಳನ್ನು</td><td>• ಸರ್ಕಾರದ ಸುತ್ತೋಲೆ ಸಂಖ್ಯೆ:ಸಕಇ 73 ಪವಯೋ 2014, ದಿನಾಂಕ:22.04.2019ರ ಮಾರ್ಗಸೂಚಿಯಂತೆ ತಿರಸ್ಕೃತಗೊಂಡಿರುವ ಅರ್ಜಿಗಳನ್ನು ಪುನರ್ ಪರಿಶೀಲಿಸಲು ಜಿಲ್ಲಾಧಿಕಾರಿಗಳ ಅಧ್ಯಕ್ಷತೆಯಲ್ಲಿ ಜಿಲ್ಲಾ ಮಟ್ಟದ ಸಮಿತಿ, ಉಪ-ವಿಭಾಗೀಯ ಮಟ್ಟದ ಸಮಿತಿ ಹಾಗೂ ಗ್ರಾಮ ಮಟ್ಟದ ಅರಣ್ಯ ಹಕ್ಕು ಸಮಿತಿಗೆ ಸೂಚಿಸಲಾಗಿರುತ್ತದೆ.</td></tr>
</table>

| | | |
|---|---|---|
| | ಪರಿಶೀಲಿಸಿ ವಿಲೇವಾರಿ ಮಾಡಲು ಕ್ರಮ ಜರುಗಿಸಲಾಗುವುದೇ ಈ ಬಗ್ಗೆ ಗಿರಿಜನ ಕಲ್ಯಾಣ ಇಲಾಖೆ, ಅರಣ್ಯ ಇಲಾಖೆ ಮತ್ತು ಕಂದಾಯ ಇಲಾಖೆಯ ಉನ್ನತ ಅಧಿಕಾರಿಗಳ ಸಭೆ ಏರ್ಪಡಿಸಿ, ಅರ್ಜಿಗಳ ವಿಲೇವಾರಿ ಮಾಡಲು ಸರ್ಕಾರ ಕ್ರಮ ಕೈಗೊಳ್ಳುವುದೇ? | • ಮಾನ್ಯ ಉಪಮುಖ್ಯಮಂತ್ರಿಗಳು, ಲೋಕೋಪಯೋಗಿ ಹಾಗೂ ಸಮಾಜ ಕಲ್ಯಾಣ ಸಚಿವರ ಅಧ್ಯಕ್ಷತೆಯಲ್ಲಿ ದಿನಾಂಕ:07.07.2020 ರಂದು ನಡೆದ ಸಭೆಯಲ್ಲಿನ ನಿರ್ಣಯದಂತೆ ಅರಣ್ಯ ಹಕ್ಕು ಅಧಿನಿಯಮ 2006 ಹಾಗೂ ನಿಯಮಗಳು 2008 ಅನುಷ್ಠಾನಗೊಳಿಸುವಲ್ಲಿ ಉಂಟಾಗಿರುವ ತೊಡಕುಗಳು ಕುರಿತು ಸಭೆ ನಡೆಸಿ ಅರಣ್ಯ ಇಲಾಖೆ ಅಧಿಕಾರಿಗಳಿಗೆ ಅರಣ್ಯ ಹಕ್ಕು ಅಧಿನಿಯಮ ಅನುಷ್ಠಾನಕ್ಕೆ ಸಹಕರಿಸುವಂತೆ ನಿರ್ದೇಶನ ನೀಡಲಾಗಿದೆ.<br>• ದಿನಾಂಕ:27.10.2020 ರಂದು ಅಪರ ಮುಖ್ಯ ಕಾರ್ಯದರ್ಶಿಗಳು, ಸಮಾಜ ಕಲ್ಯಾಣ ಇಲಾಖೆ ರವರ ಅಧ್ಯಕ್ಷತೆಯಲ್ಲಿ ನಡೆದ ಸಭೆಯಲ್ಲಿನ ನಿರ್ಣಯದಂತೆ ನಾಗರಹೊಳೆ (ರಾಜೀವ್ ಗಾಂಧಿ) ರಾಷ್ಟ್ರೀಯ ಉದ್ಯಾನವನದಲ್ಲಿನ ಬುಡಕಟ್ಟು ಜನರ ಸ್ಥಳಾಂತರ ಹಾಗೂ ಪುನರ್ವಸತಿಗೆ ಸಂಬಂಧಿಸಿದಂತೆ ಮಾನ್ಯ ಉಚ್ಛ ನ್ಯಾಯಾಲಯ ಇವರು ರಚಿಸಿರುವ ಪ್ರೋ.ಮುಜಾಫರ್ ಅಸ್ಸಾದಿ ಸಮಿತಿಯ ಶಿಫಾರಸ್ಸುಗಳನ್ನು ಕಾಲಮಿತಿಯೊಳಗೆ ಅನುಷ್ಠಾನಗೊಳಿಸಲು ಅರಣ್ಯ ಇಲಾಖೆಯವರಿಗೆ ಸೂಚಿಸಲಾಗಿದೆ ಹಾಗೂ ಅರಣ್ಯ ಹಕ್ಕುಗಾಗಿ ಅರ್ಜಿ ಸಲ್ಲಿಸಿರುವ ಅರ್ಜಿಗಳನ್ನು ಜರೂರಾಗಿ ವಿಲೇವಾರಿ ಮಾಡಲು ಕಂದಾಯ ಇಲಾಖೆ ಮತ್ತು ಅರಣ್ಯ ಇಲಾಖೆಯ ಅಧಿಕಾರಿಗಳ ಜಂಟಿ ಸರ್ವೇ ನಡೆಸಿ ಕ್ರಮಕೈಗೊಳ್ಳುವಂತೆ ಜಿಲ್ಲಾಧಿಕಾರಿಗಳಿಗೆ ಸೂಚಿಸಲಾಗಿದೆ.<br>• ಅಪರ ಮುಖ್ಯ ಕಾರ್ಯದರ್ಶಿಗಳು, ಸಮಾಜ ಕಲ್ಯಾಣ ಇಲಾಖೆ ರವರಿಂದ ದಿನಾಂಕ:24.11.2020 ರಂದು ಬರೆದಿರುವ ಅರೆ ಸರ್ಕಾರಿ ಪತ್ರದಲ್ಲಿ ತಿರಸ್ಕೃತ ಅರ್ಜಿಗಳನ್ನು ಪುನರ್ ಪರಿಶೀಲನಾ ಮಾಡುವ ಕಾರ್ಯವನ್ನು ದಿನಾಂಕ:15/12/2020 ರೊಳಗಾಗಿ ಪೂರ್ಣಗೊಳಿಸಲು ಜಿಲ್ಲಾಧಿಕಾರಿಗಳು, ಮೈಸೂರು ಮತ್ತು ಚಾಮರಾಜನಗರ ಜಿಲ್ಲೆ ರವರಿಗೆ ಸೂಚಿಸಲಾಗಿದೆ. |

ಸಕಇ 364 ಎಸ್‌ಟಿಪಿ 2020

(ಬಿ. ಶ್ರೀರಾಮುಲು)
ಸಮಾಜ ಕಲ್ಯಾಣ ಸಚಿವರು